# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 26-03-2018**

## ಪತ್ರಿಕಾ ಪ್ರಕಟಣೆಗಾಗಿ

ವಿಜಯಪುರ: ವಿವಿಧತೆಯಲ್ಲಿ ಏಕತೆಯನ್ನು ಸಾಧಿಸಿದ ದೇಶ ನಮ್ಮದು. ಈ ದೇಶದ ಏಕತೆಯ ಮಂತ್ರ ಯುವಜನತೆಯ ಕೈಯಲ್ಲಿದೆ. ಅದನ್ನು ನೀವೆಲ್ಲರೂ ಸಾಧಿಸಬೇಕೆಂದು ಮೈಸೂರಿನ ಅಬ್ದುಲ್ ನಾಜಿರ್‌ಸಾಬ್ ಗ್ರಾಮೀಣ ಅಭಿವೃದ್ಧಿ ತರಬೇತಿ ಸಂಸ್ಥೆಯ ನಿರ್ದೇಶಕ ಡಿ. ಪ್ರಾಣೇಶ್ ರಾವ್ ವಿದ್ಯಾರ್ಥಿನಿಯರಿಗೆ ಸಲಹೆ ನೀಡಿದರು.

ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್ ಅಂಬೇಡ್ಕರ ಭವನದಲ್ಲಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ರವಿವಾರ ಹಮ್ಮಿಕೊಂಡಿದ್ದ 2017-18ನೇ ಸಾಲಿನ ರಾಷ್ಟ್ರೀಯ ಭಾವೈಕ್ಯತಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾವನೆಗಳು ಐಕ್ಯಗೊಂಡಾಗ ಏಕತೆ ಮೂಡುತ್ತದೆ ಎಂದು ಹೇಳಿದರು.

ರಾಜ್ಯ ಎನ್‌ಎಸ್‌ಎಸ್ ಘಟಕದ ಪ್ರಾದೇಶಿಕ ನಿರ್ದೇಶಕ ಅರುಣ ಪೂಜಾರ ಮಾತನಾಡಿ, ಭಾರತದ ಭವಿಷ್ಯ ಯುವಶಕ್ತಿಯ ಮೇಲೆ ನಿಂತಿದೆ. ಯುವಜನತೆ ರಾಷ್ಟ್ರೀಯ ಏಕತೆ ಮತ್ತು ಸಮಗ್ರತೆಯನ್ನು ಸಂರಕ್ಷಿಸಬೇಕು ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಎಂ. ಸುಂದರೇಶ ಬಾಬು ಮಾತನಾಡಿ, ರಾಷ್ಟ್ರ ಮತ್ತು ರಾಷ್ಟ್ರ ಧರ್ಮವನ್ನು ಕಾಪಾಡುವುದು ನಮ್ಮ ಆದ್ಯ ಕರ್ತವ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಅಧ್ಯಕ್ಷತೆ ವಹಿಸಿದ್ದರು. ಶಿಬಿರಕ್ಕೆ ಗುಜರಾತ್, ಕೇರಳ, ಓರಿಸ್ಸಾ, ಆಂದ್ರಪ್ರದೇಶ, ಮಹಾರಾಷ್ಟ್ರ ಮತ್ತು ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಿಂದ 150ಕ್ಕೂ ಹೆಚ್ಚು ಎನ್‌ಎಸ್‌ಎಸ್ ಸ್ವಯಂ ಸೇವಕಿಯರು, ಬೋಧಕ-ಬೋಧಕೇತರ ಸಿಬ್ಬಂದಿ ಭಾಗವಹಿಸಿದ್ದರು.

ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಡಾ.ಬಿ.ಎಲ್. ಲಕ್ಕಣ್ಣವರ ಸ್ವಾಗತಿಸಿದರು. ಡಾ.ನಾಗರಾಜ ಎಂ ವಂದಿಸಿದರು.

ಫೋಟೋ ಕ್ಯಾಪ್ಷನ್:

1) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್ ಅಂಬೇಡ್ಕರ ಭವನದಲ್ಲಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ರವಿವಾರ ಹಮ್ಮಿಕೊಂಡಿದ್ದ 2017–18ನೇ ಸಾಲಿನ ರಾಷ್ಟ್ರೀಯ ಭಾವೈಕ್ಯತಾ ಶಿಬಿರವನ್ನು ಮೈಸೂರಿನ ಅಬ್ದುಲ್ ನಾಜಿರ್‌ಸಾಬ್ ಗ್ರಾಮೀಣ ಅಭಿವೃದ್ಧಿ ತರಬೇತಿ ಸಂಸ್ಥೆಯ ನಿರ್ದೇಶಕ ಡಿ. ಪ್ರಾಣೇಶ್ ರಾವ್ ಉದ್ಘಾಟಿಸಿದರು.

2) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್ ಅಂಬೇಡ್ಕರ ಭವನದಲ್ಲಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ರವಿವಾರ ಹಮ್ಮಿಕೊಂಡಿದ್ದ 2017–18ನೇ ಸಾಲಿನ ರಾಷ್ಟ್ರೀಯ ಭಾವೈಕ್ಯತಾ ಶಿಬಿರವನ್ನು ಮೈಸೂರಿನ ಅಬ್ದುಲ್ ನಾಜಿರ್‌ಸಾಬ್ ಗ್ರಾಮೀಣ ಅಭಿವೃದ್ಧಿ ತರಬೇತಿ ಸಂಸ್ಥೆಯ ನಿರ್ದೇಶಕ ಡಿ. ಪ್ರಾಣೇಶ್ ರಾವ್ ಉದ್ಘಾಟಿಸಿ ಮಾತನಾಡಿದರು.

